# All India Radio: Bangalore
# National Bulletin In Kannada
# 09.04.2026 19.35 hrs
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

***************

**ಮುಖ್ಯಾಂಶಗಳು**

1. **ಅಸ್ಸಾಂ, ಕೇರಳ, ಪುದುಚೇರಿ ವಿಧಾನಸಭೆ ಚುನಾವಣೆ; ಮತದಾನ ಬಹುತೇಕ ಶಾಂತಿಯುತ**
2. **ಉಪ ಚುನಾವಣೆ; ದಾವಣಗೆರೆ ದಕ್ಷಿಣ ಶೇಕಡ 68.10, ಬಾಗಲಕೋಟೆ ಶೇಕಡ 68.45 ರಷ್ಟು ಮತದಾನ**
3. **ಭೂತಾನ್ ಪ್ರಧಾನಿಯೊಂದಿಗೆ ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಮಾತುಕತೆ**
4. **ಪೋಷಣ್ ಪಾಕ್ಷಿಕ 2026ರ 8ನೇ ಆವೃತ್ತಿಗೆ ಕೇಂದ್ರ ಸಚಿವೆ ಅನ್ನಪೂರ್ಣ ದೇವಿ ಚಾಲನೆ**
5. **ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್; ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದ ಆಯುಷ್ ಶೆಟ್ಟಿ**

***************

ಅಸ್ಸಾಂ, ಕೇರಳಂ ಮತ್ತು ಪುದುಚೇರಿ ವಿಧಾನಸಭಾ ಚುನಾವಣೆಯ ಮತದಾನ ಬಹುತೇಕ ಶಾಂತಿಯುತವಾಗಿ ನಡೆದಿದೆ.

ಅಸ್ಸಾಂನ ಎಲ್ಲಾ 126 ಸ್ಥಾನ, ಕೇರಳಂನ 140 ಮತ್ತು ಪುದುಚೇರಿಯ 30 ಸ್ಥಾನಗಳಿಗೆ ಒಂದೇ ಹಂತದಲ್ಲಿ ಮತದಾನ ನಡೆದಿದೆ. ಬೆಳಗ್ಗೆ 7 ಗಂಟೆಗೆ ಆರಂಭವಾದ ಮತದಾನ, ಸಂಜೆ 6 ಗಂಟೆಗೆ ಪೂರ್ಣಗೊಂಡಿತು.

ಚುನಾವಣಾ ಆಯೋಗದ ಮಾಹಿತಿಯಂತೆ ಅಸ್ಸಾಂನಲ್ಲಿ ಶೇಕಡ 85.07, ಕೇರಳಂದಲ್ಲಿ 77.45 ಮತ್ತು ಪುದುಚೇರಿಯಲ್ಲಿ 89.13 ರಷ್ಟು ಮತದಾನವಾಗಿದೆ

ಕೇರಳಂನಲ್ಲಿ, ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಪ್ರತಿಪಕ್ಷ ನಾಯಕ ವಿ.ಡಿ.ಸತೀಸನ್, ಬಿಜೆಪಿ ರಾಜ್ಯಾಧ್ಯಕ್ಷ ರಾಜೀವ್ ಚಂದ್ರಶೇಖರ್ ತಮ್ಮ ಹಕ್ಕು ಚಲಾಯಿಸಿದರು.

ಕೇರಳಂನಲ್ಲಿ, 140 ವಿಧಾನಸಭಾ ಸ್ಥಾನಗಳಿಗೆ ಒಟ್ಟು 883 ಅಭ್ಯರ್ಥಿಗಳು, ಪುದುಚೇರಿಯಲ್ಲಿ, 294 ಅಭ್ಯರ್ಥಿಗಳು ಹಾಗೂ ಅಸ್ಸಾಂನಲ್ಲಿ, 722 ಅಭ್ಯರ್ಥಿಗಳ ಭವಿಷ್ಯ ಇವಿಎಂ ನಲ್ಲಿ ಭದ್ರವಾಗಿದೆ.

ತಮಿಳುನಾಡಿನಲ್ಲಿ ಒಂದೇ ಹಂತದ ಮತ್ತು ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ಚುನಾವಣೆ ನಾಮಪತ್ರಗಳನ್ನು ಹಿಂಪಡೆಯಲು ಇಂದು ಕೊನೆಯ ದಿನವಾಗಿತ್ತು. ನಾಲ್ಕು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ ಮತ ಎಣಿಕೆ ಮೇ 4 ರಂದು ನಡೆಯಲಿದೆ.

ಕರ್ನಾಟಕದ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಭಾ ಕ್ಷೇತ್ರಗಳ ಉಪ ಚುನಾವಣೆಯ ಮತದಾನ ಶಾಂತಿಯುತವಾಗಿ ನಡೆದಿದೆ.

ಬಾಗಲಕೋಟೆಯ ಕಣದಲ್ಲಿ 9 ಅಭ್ಯರ್ಥಿಗಳಿದ್ದರೆ, ದಾವಣಗೆರೆ ದಕ್ಷಿಣದಲ್ಲಿ ಒಟ್ಟು 25 ಅಭ್ಯರ್ಥಿಗಳ ಭವಿಷ್ಯ ಇವಿಎಂ ಭದ್ರವಾಗಿದೆ.

ಚುನಾವಣಾ ಆಯೋಗದ ಮಾಹಿತಿ ಅನ್ವಯ ಬಾಗಲಕೋಟೆಯಲ್ಲಿ ಶೇಕಡ **68.45** ರಷ್ಟು ಮತ್ತು ದಾವಣಗೆರೆ ದಕ್ಷಿಣದಲ್ಲಿ ಶೇಕಡ **68.10** ರಷ್ಟು ಮತದಾನವಾಗಿದೆ.

***************

ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಇಂದು ಭೂತಾನ್‌ಗೆ ತಮ್ಮ 4 ದಿನಗಳ ಭೇಟಿಯ ಸಂದರ್ಭದಲ್ಲಿ ಭೂತಾನ್ ಪ್ರಧಾನಿ ತ್ಸೆರಿಂಗ್ ಟೋಬ್ಗೇ ಅವರನ್ನು ಭೇಟಿ ಮಾಡಿದರು. ಸಭೆಯಲ್ಲಿ, ಇಬ್ಬರು ನಾಯಕರು ಶುದ್ಧ ಇಂಧನ ಮತ್ತು ಸುಸ್ಥಿರ ಅಭಿವೃದ್ಧಿಯಲ್ಲಿ ಸಹಕಾರವನ್ನು ಮುನ್ನಡೆಸಲು ಎರಡೂ ರಾಷ್ಟ್ರಗಳ ಹಂಚಿಕೆಯ ಬದ್ಧತೆಯನ್ನು ಪುನರುಚ್ಚರಿಸಿದರು.

ಮತ್ತೊಂದು ಸಭೆಯಲ್ಲಿ, ಸಚಿವ ಮನೋಹರ್ ಲಾಲ್ ಅವರು ಭೂತಾನ್‌ನ ಇಂಧನ ಮತ್ತು ನೈಸರ್ಗಿಕ ಸಂಪನ್ಮೂಲ ಸಚಿವ ಲಿಯಾನ್ಪೊ ಜೆಮ್ ತ್ಸೆರಿಂಗ್ ಅವರನ್ನು ಭೇಟಿಯಾದರು. ಈ ಸಂದರ್ಭದಲ್ಲಿ ಪುನತ್ಸಾಂಗ್ಚು–2 ಜಲವಿದ್ಯುತ್ ಯೋಜನೆಯ ಒಪ್ಪಂದಕ್ಕೆ ಸಹಿ ಹಾಕಿದರು.

***************

ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣದೇವಿ ನವದೆಹಲಿಯಲ್ಲಿ ಇಂದು ಪೋಷಣ್ ಪಾಕ್ಷಿಕ 2026ರ 8ನೇ ಆವೃತ್ತಿಗೆ ಚಾಲನೆ ನೀಡಿದರು.

'ಜೀವನದ ಮೊದಲ ಆರು ವರ್ಷಗಳಲ್ಲಿ ಮೆದುಳಿನ ಬೆಳವಣಿಗೆಯನ್ನು ಗರಿಷ್ಠಗೊಳಿಸುವುದು' ಎಂಬುದು ಪೋಷಣ್ ಪಾಕ್ಷಿಕ ಕಾರ್ಯಕ್ರಮದ ವಿಷಯವಾಗಿದೆ. ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಈ ಪಾಕ್ಷಿಕವು ಪೌಷ್ಠಿಕಾಂಶವನ್ನು ಜನರ ಚಳವಳಿಯನ್ನಾಗಿ ಪರಿವರ್ತಿಸುವ ಪ್ರಯತ್ನವಾಗಿದೆ. ಅಂಗನವಾಡಿ ಮತ್ತು ಆಶಾ ಕಾರ್ಯಕರ್ತರು ಈ ಆಂದೋಲನದ ಬೆನ್ನೆಲುಬಾಗಿದ್ದು, ಇವರು ಅವಿಶ್ರಾಂತವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

***************

ರಕ್ಷಣಾ ಪಡೆಗಳ ಮೂರು ವಿಭಾಗಗಳಾದ ಸೇನೆ, ವಾಯು ಮತ್ತು ನೌಕಾಪಡೆ ಸಮನ್ವಯದೊಂದಿಗೆ ಯುದ್ಧ ಮಾಡಬಲ್ಲ ಸಂಯುಕ್ತ ಶಕ್ತಿಯಾಗಿ ರೂಪುಗೊಳ್ಳಲು ಥಿಯೇಟರ್ ಕಮಾಂಡ್ ಪರಿಕಲ್ಪನೆ ಮಾಡಲಾಗಿದೆ. ಇದಕ್ಕೆ ಒಂದು ರೂಪ ನೀಡಲಾಗುತ್ತಿದ್ದು, ಶೀಘ್ರವೇ ಅಸ್ಥಿತ್ವಕ್ಕೆ ಬರಲಿದೆ ಎಂದು ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಆರಂಭವಾದ ರಣ್ ಸಂವಾದ್ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸ್ವರೂಪ ಅಸ್ಥಿತ್ವಕ್ಕೆ ಬಂದ ಬಳಿಕ ರಕ್ಷಣಾ ಪಡೆಗಳು ಒಂದಕ್ಕೊಂದು ಪೂರಕವಾಗಿ ಶಸ್ತ್ರಾಭ್ಯಾಸ ಮಾಡಲಿದ್ದು, ತರಬೇತಿ ಪಠ್ಯವನ್ನು ಇದಕ್ಕೆ ಅನುರೂಪವಾಗಿ

ಅಭಿವೃದ್ಧಿಪಡಿಸಲಾಗುವುದು. ರುದ್ರ ಮತ್ತು ಭೈರವ್ ಸೇನಾ ತುಕಡಿಗಳು ಈಗಾಗಲೇ ಇಂತಹ ಸಂಯುಕ್ತ ಸಾಮರ್ಥ್ಯವನ್ನು ಹೊಂದಿದೆ ಎಂದು ಹೇಳಿದ್ದಾರೆ.

ಭಾರತೀಯ ನೌಕಾಪಡೆ ಮುಖ್ಯಸ್ಥರಾದ ಅಡ್ಮಿರಲ್ ದಿನೇಶ್ ಕುಮಾರ್ ತ್ರಿಪಾಠಿ ಮಾತನಾಡಿ, ನೌಕಾಪಡೆ, ಸೇನೆ ಮತ್ತು ವಾಯುಪಡೆಯೊಂದಿಗೆ ಜಂಟಿಯಾಗಿ ಕಾರ್ಯ ನಿರ್ವಹಿಸಬಲ್ಲ ವ್ಯವಸ್ಥೆಯನ್ನು ರೂಢಿಸಿಕೊಳ್ಳುತ್ತಿದೆ. ಸಾಂಪ್ರದಾಯಿಕ ಯುದ್ಧ ಕೌಶಲ್ಯದ ಜೊತೆಗೆ ಪೈಲಟ್ ರಹಿತ ಯುದ್ಧ ವಿಮಾನ ಬಳಕೆ, ಉಪಗ್ರಹ ಆಧಾರಿತ ಸಂವಹನ ವ್ಯವಸ್ಥೆ ಹಾಗೂ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಬಳಸುವ ಸಾಮರ್ಥ್ಯ ಪಡೆಯಲಿದೆ ಎಂದು ತಿಳಿಸಿದ್ದಾರೆ.

*******ಧ್ವನಿ***** ದಿನೇಶ್ ಕುಮಾರ್ ತ್ರಿಪಾಠಿ**

***************

ಮಹಿಳಾ ಮೀಸಲಾತಿ ಮಸೂದೆ ಕುರಿತು ಮಾತನಾಡಿದ ನಾರಿ ಶಕ್ತಿ ಪ್ರಶಸ್ತಿ ಪುರಸ್ಕೃತೆ ವಿಮಲಾ, ಇದು ಅತ್ಯಂತ ಮಹತ್ವದ ಉಪಕ್ರಮ ಎಂದು ಶ್ಲಾಘಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕಾರ ವಹಿಸಿಕೊಂಡಾಗಿನಿಂದ ಮಹಿಳೆಯರ ಘನತೆ ಮತ್ತು ಗೌರವವನ್ನು ಕೇಂದ್ರೀಕರಿಸಿ ಸ್ಥಿರ ಪ್ರಯತ್ನಗಳನ್ನು ಮಾಡಿದ್ದಾರೆ. ಈ ಉಪಕ್ರಮವು ರಾಜಕೀಯ ಸಬಲೀಕರಣದ ಹಂತವನ್ನು ತಲುಪಿದೆ. ಮನೆಯಿಂದ ಸಂಸತ್ತಿಗೆ ಮಹಿಳೆಯರ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳುವತ್ತ ಹೆಜ್ಜೆಯಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಈ ಉಪಕ್ರಮವು ಖಚಿತವಾಗಿಯು ಮಹಿಳೆಯರಿಗೆ ಒಂದು ಅವಕಾಶವೆಂದು ಸಾಬೀತುಪಡಿಸುತ್ತದೆ ಎಂದು ಪದ್ಮ ಪ್ರಶಸ್ತಿ ಪುರಸ್ಕೃತೆ ಲಿಬಿಯಾ ಲೋಬೊ ಸರ್ದೇಸಾಯಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂಬರುವ ಪೀಳಿಗೆಗಳು ಇದರ ಪ್ರಯೋಜನ ಪಡೆಯುತ್ತವೆ ಎಂದು ಆಶಿಸಿದ್ದಾರೆ.

***************

ಎಲ್‌ಪಿಜಿ ಹೊತ್ತ ಭಾರತೀಯ ಧ್ವಜವನ್ನು ಹೊಂದಿರುವ ಗ್ರೀನ್ ಆಶಾ ಹಡಗು ಇಂದು ಮುಂಜಾನೆ ಸುರಕ್ಷಿತವಾಗಿ ನವಿಮುಂಬೈನ ಬಂದರು ತಲುಪಿದೆ ಎಂದು ಬಂದರುಗಳು, ಹಡಗು, ಜಲಮಾರ್ಗಗಳ ಹೆಚ್ಚುವರಿ ಕಾರ್ಯದರ್ಶಿ ಮುಕೇಶ್ ಮಂಗಲ್ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಈ ಹಡಗು ಏಪ್ರಿಲ್ 5 ರಂದು ಹಾರ್ಮುಜ್ ಜಲಸಂಧಿಯನ್ನು ದಾಟಿತ್ತು ಎಂದರು.

***************

ದೇಶದಲ್ಲಿ ಎಲ್ಲಾ ಮನೆಗಳಿಗೆ ಶೇಕಡ 100 ರಷ್ಟು ಎಲ್‌ಪಿಜಿ ಪೂರೈಕೆಯನ್ನು ಸರ್ಕಾರ ಖಚಿತಪಡಿಸುತ್ತಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿನ್ನೆ 51 ಲಕ್ಷಕ್ಕೂ ಹೆಚ್ಚು ಮನೆಗಳಿಗೆ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಿತರಿಸಲಾಗಿದೆ. ಒಟಿಪಿ ಆಧಾರಿತ ಎಲ್‌ಪಿಜಿ ವಿತರಣೆ ಶೇಕಡ 92 ರಷ್ಟು ತಲುಪಿದೆ. ಮತ್ತು ಆನ್‌ಲೈನ್ ಬುಕ್ಕಿಂಗ್ ಶೇಕಡ 98ರಷ್ಟು ತಲುಪಿದೆ ಎಂದು ಅವರು ಮಾಹಿತಿ ನೀಡಿದರು.

***************

ದೇಶದಲ್ಲಿ ಅಗತ್ಯ ಔಷಧ ಸಾಮಗ್ರಿಗಳ ನಿರಂತರ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಸಂಬಂಧಿತ ಇಲಾಖೆಗಳು ನಿಕಟ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುತ್ತಿವೆ ಎಂದು ಔಷಧ ಇಲಾಖೆಯ ಜಂಟಿ ಕಾರ್ಯದರ್ಶಿ ಸತ್ಯಪ್ರಕಾಶ್ ಟಿ.ಎಲ್ ತಿಳಿಸಿದ್ದಾರೆ.

ಈ ಕುರಿತು ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದಾಗಿ ಔಷಧ ಸಾಮಗ್ರಿಗಳ ಜಾಗತಿಕ ಪೂರೈಕೆ ಸರಪಳಿಗಳು ಅಸ್ತವ್ಯಸ್ಥಗೊಂಡಿವೆ. ಆದರೂ ಔಷಧಗಳ ಬೆಲೆಯಲ್ಲಿ ಯಾವುದೇ ಪ್ರಮುಖ ಏರಿಕೆ ಕಂಡು ಬಂದಿಲ್ಲ ಎಂದು ಹೇಳಿದರು.

***************

ಬ್ಯಾಡ್ಮಿಂಟನ್ ಏಷ್ಯ ಚಾಂಪಿಯನ್‌ಶಿಪ್‌ನ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಆಯುಷ್ ಶೆಟ್ಟಿ ಕ್ವಾಟರ್ ಫೈನಲ್ಸ್ ಪ್ರವೇಶಿಸಿದ್ದಾರೆ. ಅವರು ಚಿನಾದ ಚಿ ಯ ಯನ್ ಅವರನ್ನು 21–16, 21–12 ನೇರ ಸೆಟ್‌ಗಳಿಂದ ಪರಾಭವಗೊಸುವ ಮೂಲಕ ಕ್ವಾರ್ಟರ್ ಫೈನಲ್‌ಗೆ ಮುನ್ನಡೆದರು.

ಇನ್ನೊಂದೆಡೆ ಎಚ್.ಎಸ್.ಪ್ರಣಯ್, ಚೀನಾದ ವೆಂಗ್ ಹಾಂಗ್ ಯಾಂಗ್ ವಿರುದ್ಧ 12–21, 19–21 ಅಂತರದಲ್ಲಿ ಸೋತ ನಂತರ ಪಂದ್ಯಾವಳಿಯಿಂದ ನಿರ್ಗಮಿಸಿದರು.

***************

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್–ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಮತ್ತು ಲಖನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಲಖನೌ ಸೂಪರ್ ಜೈಂಟ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

***************

ಮಂಗೋಲಿಯಾದಲ್ಲಿ ಇಂದು ನಡೆದ ಏಷ್ಯನ್ ಬಾಕ್ಸಿಂಗ್ ಚಾಂಪಿಯನ್‌ಶಿಪ್‌ನ ಸ್ಪರ್ಧೆಗಳಲ್ಲಿ ಭಾರತೀಯ ಮಹಿಳಾ ಬಾಕ್ಸರ್‌ಗಳು ಪ್ರಾಬಲ್ಯ ಸಾಧಿಸಿದ್ದಾರೆ. ಪದಕ ಪಟ್ಟಿಯಲ್ಲಿ ಭಾರತ, ನಾಲ್ಕು ಚಿನ್ನ, ಎರಡು ಬೆಳ್ಳಿ, ನಾಲ್ಕು ಕಂಚಿನ ಪದಕ ಸೇರಿದಂತೆ ಒಟ್ಟು 10 ಪದಕಗಳೊಂದಿಗೆ ಪ್ರಥಮ ಸ್ಥಾನದಲ್ಲಿದೆ.

*******ಮುಕ್ತಾಯ*******